**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರವಾಗಿ ಶ್ರೀ ಎ.ಆರ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.–1 | ಚೆಕ್ |
| ನಿ.ಪಿ.–1(ಎ) | ಪ್ರತಿವಾದಿಯ ಸಹಿ |
| ನಿ.ಪಿ.–2 | ಬ್ಯಾಂಕ್ ನವರು ಕೊಟ್ಟಿರುವ ಹಿಂಬರಹ |
| ನಿ.ಪಿ.–3 | ಲೀಗಲ್ ನೋಟಿಸು |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪ್ರತಿವಾದಿಯ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**